ಶಿಕ್ಷಕರ ಕೊರತೆ ಮತ್ತು ನೇಮಕಾತಿ

1464(1718), ಶ್ರೀ ಹ್ಯಾರಿಸ್ ಎನ್.ಎ.(ಶಾಂತಿನಗರ)

ಅ) ರಾಜ್ಯದಲ್ಲಿ ಕೊರತೆ ಇರುವ ಪ್ರಾಥಮಿಕ, ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಶಿಕ್ಷಕರು/ಉಪನ್ಯಾಸಕರುಗಳ ಸಂಖ್ಯೆ ಎಷ್ಟು; ಅವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

ಆ) ಕೊರತೆಯನ್ನು ತಕ್ಷಣ ನೀಗಿಸುವ ನಿಟ್ಟಿನಲ್ಲಿ ತಾತ್ಕಾಲಿಕವಾಗಿ ನೇಮಕ ಮಾಡಿಕೊಂಡ ಅತಿಥಿ ಶಿಕ್ಷಕರು/ಉಪನ್ಯಾಸಕರುಗಳ ಸಂಖ್ಯೆ ಎಷ್ಟು; ಅವರುಗಳಿಗೆ ಒದಗಿಸಿಕೊಟ್ಟ ಸೇವಾ ಭದ್ರತೆ ಮತ್ತು ಇತರ ಸೌಲಭ್ಯಗಳು ಯಾವುವು; (ವಿವರ ಒದಗಿಸುವುದು)

ಇ) ಅತಿಥಿ ಶಿಕ್ಷಕರು/ಉಪನ್ಯಾಸಕರುಗಳ ನೇಮಕದ ನಂತರವೂ ಕೊರತೆ ಇರುವ ಶಿಕ್ಷಕರುಗಳ ಸಂಖ್ಯೆ ಎಷ್ಟು; ಅವಶ್ಯಕವಿರುವ ಶಿಕ್ಷಕರುಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಶೀಘ್ರ ಕ್ರಮ ಕೈಗೊಳ್ಳುವುದೇ?

ಶ್ರೀ ಕಿಮ್ಮನೆ ರತ್ನಾಕರ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಒಟ್ಟು 17738 ಹುದ್ದೆಗಳು ಖಾಲಿ ಇರುತ್ತವೆ.

ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಒಟ್ಟು 1137 ಹುದ್ದೆಗಳು ಖಾಲಿ ಇರುತ್ತವೆ.

ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಸಂಖ್ಯೆ: 1325 ಖಾಲಿ ಇರುವ ಪ್ರಾಥಮಿಕ ಶಿಕ್ಷಕರನ್ನು ಭರ್ತಿ ಮಾಡಲು ಅರ್ಹತಾ ಪರೀಕ್ಷೆಯನ್ನು (ಟಿಇಟಿ) ನಡೆಸಲಾಗಿದೆ. ಇನ್ನುಳಿದಂತೆ ಪ್ರೌಢ ಶಾಲಾ ಶಿಕ್ಷಕರು ಹಾಗೂ ಸರ್ಕಾರಿ ಪದವಿ

ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಪ್ರಕ್ರಿಯೆ ಜಾರಿಯಲ್ಲಿದೆ.

ಆ) ತಾತ್ಕಾಲಿಕವಾಗಿ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ 9405 ಮತ್ತು ಸರ್ಕಾರಿ ಪ್ರೌಢ ಶಾಲೆಗಳಿಗೆ 1137 ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಸರ್ಕಾರದ ಅನುಮತಿ ನೀಡಲಾಗಿದೆ. ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಗೌರವ ಧನ ಮಾಹೆಯಾನ ₹ 5500/– ಮತ್ತು ಪ್ರೌಢ ಶಾಲಾ ಶಿಕ್ಷಕರಿಗೆ ₹ 6000/– ಹಾಗೂ ಪದವಿ ಪೂರ್ವ ಉಪನ್ಯಾಸಕರಿಗೆ ಮಾಹೆಯಾನ ₹ 7000/– ಗಳನ್ನು ನಿಗದಿಪಡಿಸಲಾಗಿದೆ.

ಇ) ಸರ್ಕಾರವು ಅನುಮತಿ ನೀಡಿದ 9405 ಅತಿಥಿ ಶಿಕ್ಷಕರ ಹೊರತಾಗಿ ಇನ್ನು 8227 ಹುದ್ದೆಗಳು ಖಾಲಿ ಇರುತ್ತವೆ. ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳ ನೇಮಕಾತಿ ನಂತರವೂ 1518 ಉಪನ್ಯಾಸಕರುಗಳ ಕೊರತೆ ಇರುತ್ತದೆ. ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಪರಿಶೀಲನೆಯಲ್ಲಿದೆ.

ಶಾಲಾ ಮಕ್ಕಳಿಗೆ ಸಮವಸ್ತ್ರ ಪೂರೈಕೆ

1465(1719), ಶ್ರೀ ಹ್ಯಾರಿಸ್ ಎನ್.ಎ.(ಶಾಂತಿನಗರ)

ಅ) ಶಾಲಾ ಮಕ್ಕಳಿಗೆ ಸಮವಸ್ತ್ರ ಪೂರೈಕೆಗೆ ಸರ್ಕಾರ ಸಂದಾಯ ಮಾಡುತ್ತಿರುವ ವಾರ್ಷಿಕ ಆರ್ಥಿಕ ವೆಚ್ಚದ ಮೊತ್ತವೆಷ್ಟು (ವಿವರ ಒದಗಿಸುವುದು)

ಆ) ಸಮವಸ್ತ್ರ ಸರಬರಾಜಿನ ಹೊಣೆಗಾರಿಕೆಯನ್ನು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದವರಿಗೆ ವಹಿಸಿದಲ್ಲಿ, ವಿವರ ಒದಗಿಸುವುದು;